ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ________

ಪತ್ರಿಕೆಯ ಹೆಸರು : NAME OF THE NEWS PAPER: ________ ದಿನಾಂಕ : DATE : 18/12/20

# ಉದ್ಯಮಿ ಆರ್.ಎನ್. ಶೆಟ್ಟಿ ನಿಧನ



ಆರ್.ಎನ್. ಶೆಟ್ಟಿ

ಬೆಂಗಳೂರು: ಆರ್.ಎನ್.ಎಸ್. ಶಿಕ್ಷಣ ಮತ್ತು ಉದ್ಯಮ ಸಮೂಹಗಳ ಸ್ಥಾಪಕ ಆರ್.ಎನ್. ಶೆಟ್ಟಿ (92) ಗುರುವಾರ ಬೆಳಿಗ್ಗೆ ಹೃದಯಾಘಾತದಿಂದ ನಿಧನರಾದರು. ಅವರಿಗೆ ಪತ್ನಿ, ಮೂವರು ಪುತ್ರರು ಇದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಮುರುಡೇಶ್ವರದಲ್ಲಿ 1928ರ ಆಗಸ್ಟ್ 15 ರಂದು ಜನಿಸಿದ್ದ ರಾಮ ನಾಗಪ್ಪ ಶೆಟ್ಟಿ, ಔದ್ಯೋಗಿಕ, ಕಟ್ಟಡ ನಿರ್ಮಾಣ ಕ್ಷೇತ್ರದಲ್ಲಿ ತೊಡಗಿಸಿಕೊಂಡಿದ್ದರು.

6ನೇ ಪುಟ ನೋಡಿ

ನುಡಿ ನಮನ 10

# ಉದ್ಯಮಿ ಆರ್.ಎನ್. ಶೆಟ್ಟಿ ನಿಧನ

ಒಂದನೇ ಪುಟದಿಂದ...

1961ರಲ್ಲಿ ಮೂಲಸೌಕರ್ಯ ಕಂಪನಿ ಹುಟ್ಟು ಹಾಕಿದ್ದ ಅವರು ಹಿಡಕಲ್, ತಟ್ಟಿಹಳ್ಳ, ಸೂಪಾ, ಗೇರುಸೊಪ್ಪ ಜಲಾಶಯ, ಮಾಣಿ ಅಣೆಕಟ್ಟೆ, ವಾರಾಹಿ ಜಲ ವಿದ್ಯುತ್ ಯೋಜನೆ, ಕೊಂಕಣ ರೈಲು ಸುರಂಗ, ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣ ಸೇರಿದಂತೆ ಹಲವು ಯೋಜನೆಗಳನ್ನು ಯಶಸ್ವಿಯಾಗಿ ನಿರ್ವಹಿಸಿದ್ದರು. ನಂತರ, ಶೈಕ್ಷಣಿಕ ಮತ್ತು ವೈದ್ಯಕೀಯ ಕ್ಷೇತ್ರಕ್ಕೂ ಧುಮುಕಿದ್ದ ಅವರು, ಈ ಕ್ಷೇತ್ರದಲ್ಲಿಯೂ ತಮ್ಮದೇ ಆದ ಛಾಪು ಮೂಡಿಸಿದ್ದರು. ನಗರದಲ್ಲಿ ಆರ್.ಎನ್.ಎಸ್. ತಾಂತ್ರಿಕ ಸಂಸ್ಥೆಯನ್ನು ಸ್ಥಾಪಿಸಿದ್ದರು.

ಹುಟ್ಟೂರು ಮುರುಡೇಶ್ವರದಲ್ಲಿನ ಐತಿಹಾಸಿಕ ಮುರುಡೇಶ್ವರ ದೇಗುಲದ ಆಧುನೀಕರಣ ಕಾರ್ಯ ಕೈಗೆತ್ತಿಕೊಂಡಿದ್ದರು. ದೇಗುಲಕ್ಕೆ 240 ಅಡಿ ಎತ್ತರದ ರಾಜಗೋಪುರ ನಿರ್ಮಾಣ ಮಾಡಿಸಿದ್ದರು. ಎಫ್‌ಕೆಸಿಸಿಐ ವತಿಯಿಂದ 2004 ರಲ್ಲಿ ವಿಶ್ವೇಶ್ವರಯ್ಯ ಸ್ಮಾರಕ ಪ್ರಶಸ್ತಿ ನೀಡಿ ಗೌರವಿಸಲಾಗಿತ್ತು. ಬೆಂಗಳೂರು ವಿಶ್ವವಿದ್ಯಾಲಯವು 2009ರಲ್ಲಿ ಗೌರವ ಡಾಕ್ಟರೇಟ್ ನೀಡಿತ್ತು. ಸಾವಿರಾರು ಜನರಿಗೆ ನೆರವಿನ ಹಸ್ತ ಚಾಚಿದ್ದ ಅವರನ್ನು 'ಮಹಾದಾನಿ' ಎಂದೇ ಜನ ಕರೆಯುತ್ತಾರೆ.

ಉತ್ತರಹಳ್ಳಿಯ ಆರ್.ಎನ್.ಎಸ್. ತಾಂತ್ರಿಕ ಕಾಲೇಜು ಆವರಣದಲ್ಲಿ ಪಾರ್ಥಿವ ಶರೀರವನ್ನು ಗುರುವಾರ ಮಧ್ಯಾಹ್ನದವರೆಗೆ ಸಾರ್ವಜನಿಕರ ದರ್ಶನಕ್ಕೆ ಇಡಲಾಗಿತ್ತು. ಸಂಜೆ ಅಂತ್ಯಸಂಸ್ಕಾರ ನೆರವೇರಿಸಲಾಯಿತು.